## ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| **1.** ಚುಕ್ಕೆ ಗುರುತಿನ ಪ್ರಶ್ನೆ ಸಂಖ್ಯೆ | : | 816 |
| **2.** ಮಾನ್ಯ ಸದಸ್ಯರ ಹೆಸರು | : | ಶ್ರೀ ಕೆ.ಎಸ್.ನವೀನ್ (ಸ್ಥಳೀಯ ಸಂಸ್ಥೆಗಳಿಂದ ಚುನಾಯಿತರಾದವರು) |
| **3.** ಉತ್ತರಿಸಬೇಕಾದ ದಿನಾಂಕ | : | 20.02.2024 |
| **4.** ಉತ್ತರಿಸುವ ಸಚಿವರು | : | ಜವಳಿ, ಕಬ್ಬು ಅಭಿವೃದ್ಧಿ ಮತ್ತು ಸಕ್ಕರೆ ಹಾಗೂ ಕೃಷಿ ಮಾರುಕಟ್ಟೆ ಸಚಿವರು |

| ಕ್ರ.ಸಂ | ಪ್ರಶ್ನೆ | ಉತ್ತರ |
|---|---|---|
| (ಅ) | ಚಿತ್ರದುರ್ಗ ಜಿಲ್ಲೆ, ಹಿರಿಯೂರು ತಾಲ್ಲೂಕಿನ ವಾಣಿವಿಲಾಸ ಸಕ್ಕರೆ ಕಾರ್ಖಾನೆ ಮುಚ್ಚಲ್ಪಟ್ಟಿದ್ದು ಇದನ್ನು ಪುನರಾರಂಭ ಮಾಡುವ ಉದ್ದೇಶ ಸರ್ಕಾರಕ್ಕಿದೆಯೇ; | ವಾಣಿವಿಲಾಸ ಸಹಕಾರಿ ಸಕ್ಕರೆ ಕಾರ್ಖಾನೆ ನಿ., ಹಿರಿಯೂರು ಈ ಕಾರ್ಖಾನೆಯು 1961 ರಲ್ಲಿ ಸಹಕಾರ ಕ್ಷೇತ್ರದಲ್ಲಿ ನೋಂದಣಿಗೊಂಡಿರುತ್ತದೆ. ಕಾರ್ಖಾನೆ 1250 ಟಿಸಿಡಿ ಕಬ್ಬು ನುರಿಸುವ ಸಾಮರ್ಥ್ಯ ಹೊಂದಿರುತ್ತದೆ. ಈ ಕಾರ್ಖಾನೆಯು ದುಡಿಯುವ ಬಂಡವಾಳ ಮತ್ತು ಕಬ್ಬಿನ ಕೊರತೆಯಿಂದಾಗಿ 2003-04ನೇ ಸಾಲಿನಿಂದ ಕಬ್ಬು ಅರೆಯುವ ಕಾರ್ಯವನ್ನು ಸ್ಥಗಿತಗೊಳಿಸಿರುತ್ತದೆ.<br>ಆರ್ಥಿಕ ಸಂಕಷ್ಟದಿಂದ ಹಾಗೂ ಇನ್ನಿತರೆ ಕಾರಣಗಳಿಂದ ಸ್ಥಗಿತಗೊಂಡ ಸಹಕಾರಿ ಸಕ್ಕರೆ ಕಾರ್ಖಾನೆಗಳನ್ನು ಕಬ್ಬು ಬೆಳೆಗಾರ ರೈತರ ಮತ್ತು ಕಾರ್ಮಿಕರ ಹಿತದೃಷ್ಟಿಯಿಂದ ಖಾಸಗಿಯವರಿಗೆ ದೀರ್ಘಾವಧಿಯ ಮೇಲೆ ಎಲ್.ಆರ್.ಓ.ಟಿ. ಆಧಾರದ ಮೇಲೆ ಗುತ್ತಿಗೆ ನೀಡುವುದರ ಮೂಲಕ ಪುನಶ್ಚೇತನಗೊಳಿಸುವುದು ಸರ್ಕಾರದ ನೀತಿಯಾಗಿರುತ್ತದೆ.<br>ಅದರಂತೆ, ಈ ಕಾರ್ಖಾನೆಯನ್ನು ಗುತ್ತಿಗೆ ನೀಡುವ ಮೂಲಕ ಪುನಶ್ಚೇತನಗೊಳಿಸುವ ಸಂಬಂಧ 2007ನೇ ಸಾಲಿನಲ್ಲಿ ಹಲವಾರು ಬಾರಿ ಟೆಂಡರ್ ಪ್ರಕಟಣೆ ನೀಡಲಾಗಿತ್ತು. ಆದರೆ ಯಾವೊಬ್ಬ ಬಿಡ್ಡುದಾರರು ಟೆಂಡರ್ ಪ್ರಕ್ರಿಯೆಯಲ್ಲಿ ಭಾಗವಹಿಸದೇ ಇರುವುದರಿಂದ ಕಾರ್ಖಾನೆಯನ್ನು ಗುತ್ತಿಗೆ ನೀಡುವ ಸರ್ಕಾರದ ಪ್ರಯತ್ನ ಯಶಸ್ವಿಯಾಗಲಿಲ್ಲ.<br>ಕಾರ್ಖಾನೆಯನ್ನು 2013 ರಲ್ಲಿ ಸಮಾಪನೆಗೊಳಿಸಿ ಸಮಾಪನಾಧಿಕಾರಿಗಳನ್ನು ನೇಮಕ ಮಾಡಲಾಗಿರುತ್ತದೆ. ಪ್ರಸ್ತುತ ಕಾರ್ಖಾನೆಗೆ ಸಹಕಾರ ಸಂಘಗಳ ಉಪನಿಬಂಧಕರು, ಚಿತ್ರದುರ್ಗ ಜಿಲ್ಲೆ ಇವರು ಸಮಾಪನಾಧಿಕಾರಿಗಳಾಗಿ ಕರ್ತವ್ಯ ನಿರ್ವಹಿಸುತ್ತಿದ್ದಾರೆ.<br>ಕಾರ್ಖಾನೆಗೆ ಸೇರಿದ ಸುಮಾರು 270.37 ಎಕರೆ ಜಮೀನು ಇದ್ದು, ಪ್ರಸ್ತುತ ಸದರಿ ಕಾರ್ಖಾನೆಯನ್ನು ಪುನರ್ ಆರಂಭಿಸಲು ಕೋರಿ ಜನಪ್ರತಿನಿಧಿಗಳು, ರೈತ ಸಂಘಟನೆಗಳು ಮತ್ತು ಸಾರ್ವಜನಿಕರಿಂದ ಮನವಿಗಳು ಸ್ವೀಕೃತವಾಗಿದ್ದು, ಈ ವಿಷಯದ ಬಗ್ಗೆ Techno Economic Feasibility Report ಪಡೆದು ಇದರ ಸಾಧಕ – ಬಾಧಕಗಳ ಕುರಿತು ನಿಯಮಾನುಸಾರ ಪರಿಶೀಲಿಸಲಾಗುವುದು. |
| (ಆ) | ನೂರಾರು ಎಕರೆ ಕೋಟಿ ಕೋಟಿ ಬೆಲೆ ಬಾಳುವ ಜಮೀನಿನಲ್ಲಿ ಈ ಸಕ್ಕರೆ ಕಾರ್ಖಾನೆಯಿದ್ದು, ಈ ವಾಣಿವಿಲಾಸ ಸಕ್ಕರೆ ಕಾರ್ಖಾನೆಗೆ ಭದ್ರಾ ಮೇಲ್ದಂಡೆ ಯೋಜನೆ ಹಿನ್ನಲೆಯಲ್ಲಿ ನೀರು ಬರುತ್ತಿರುವ ಕಾರಣಕ್ಕೆ ಈ ಸಹಕಾರಿ ಸಂಸ್ಥೆಯನ್ನು ಪುನಶ್ಚೇತನ ಮಾಡುವ ಯೋಜನೆ ಕುರಿತು ಸರ್ಕಾರ ಕೈಗೊಂಡ ಕ್ರಮವೇನು? | |

**ಸಂಖ್ಯೆ:** ಸಿಐ 50 ಸಿಓಎಫ್ 2024

(ಶಿವಾನಂದ ಎಸ್ ಪಾಟೀಲ)
ಜವಳಿ, ಕಬ್ಬು ಅಭಿವೃದ್ಧಿ ಮತ್ತು ಸಕ್ಕರೆ
ಹಾಗೂ ಕೃಷಿ ಮಾರುಕಟ್ಟೆ ಸಚಿವರು